**ಕರ್ನಾಟಕ ಸರ್ಕಾರದ ನಡವಳಿಗಳು**

**ವಿಷಯ:** ಮಲೆನಾಡು ಪ್ರದೇಶಾಭಿವೃದ್ಧಿ ಮಂಡಳಿ, ಶಿವಮೊಗ್ಗಕ್ಕೆ 2016-17ನೇ ಸಾಲಿನ ಪ್ರಥಮ ಕಂತಿನ ಅನುದಾನ ಬಿಡುಗಡೆ ಮಾಡುವ ಬಗ್ಗೆ.

**ಓದಲಾಗಿದೆ:** ಕಾರ್ಯದರ್ಶಿ, ಮಲೆನಾಡು ಪ್ರದೇಶಾಭಿವೃದ್ಧಿ ಮಂಡಳಿ, ಶಿವಮೊಗ್ಗ ಇವರ ಪತ್ರ ಸಂಖ್ಯೆ ಮಪ್ರಮಂ:ನಗದು:ಹ:ಬಿ:2016-17/26, ದಿನಾಂಕ 11.04.2016

**ಪ್ರಸ್ತಾವನೆ:**

ಮಲೆನಾಡು ಪ್ರದೇಶಾಭಿವೃದ್ಧಿ ಮಂಡಳಿಗೆ 2016-17ನೇ ಸಾಲಿನ ಆಯವ್ಯಯದಲ್ಲಿ ಒಟ್ಟು ರೂ.5000.00 ಲಕ್ಷಗಳನ್ನು ಈ ಕೆಳಕಂಡಂತೆ ಒದಗಿಸಲಾಗಿದೆ.

| ಕ್ರಮ ಸಂಖ್ಯೆ | ಲೆಕ್ಕಶೀರ್ಷಿಕೆ | ಮೊತ್ತ (ರೂ. ಲಕ್ಷಗಳಲ್ಲಿ) |
|---|---|---|
| 1 | 2515-00-103-0-02-101 (ಸಹಾಯಾನುದಾನ) | 41.00 |
| 2 | 2515-00-103-0-02-132 (ಬಂಡವಾಳ ವೆಚ್ಚ) | 3751.00 |
| 3 | 2515-00-103-0-02-422 (ವಿಶೇಷ ಘಟಕ ಯೋಜನೆ) | 859.00 |
| 4 | 2515-00-103-0-02-423 (ಗಿರಿಜನ ಉಪಯೋಜನೆ) | 349.00 |
| | **ಒಟ್ಟು** | **5000.00** |

ಮೇಲೆ ಓದಲಾದ ಪತ್ರದಲ್ಲಿ, ಕಾರ್ಯದರ್ಶಿ, ಮಲೆನಾಡು ಪ್ರದೇಶಾಭಿವೃದ್ಧಿ ಮಂಡಳಿ, ಶಿವಮೊಗ್ಗ ಇವರು 2015-16ನೇ ಸಾಲಿನಲ್ಲಿ ಮುಂದುವರಿದ ಕಾಮಗಾರಿಗಳ ಕ್ರಿಯಾ ಯೋಜನೆಯಡಿ ಬಹುತೇಕ ಕಾಮಗಾರಿಗಳ ಬಿಲ್ಲುಗಳ ಪಾವತಿಗಾಗಿ ಮಂಡಳಿಯ ಆಡಳಿತ ವೆಚ್ಚಕ್ಕಾಗಿ 2016-17ನೇ ಸಾಲಿನ ಪ್ರಥಮ ಕಂತಿನ ಅನುದಾನ ಬಿಡುಗಡೆ ಮಾಡಲು ಕೋರಿರುತ್ತಾರೆ. ಪ್ರಸ್ತಾವನೆಯನ್ನು ಪರಿಶೀಲಿಸಿದ ಸರ್ಕಾರವು ಮಂಡಳಿಗೆ ಪ್ರಥಮ ಕಂತಿನ ಅನುದಾನ ಬಿಡುಗಡೆ ಮಾಡಲು ಉದ್ದೇಶಿಸಿದೆ. ಅದರಂತೆ ಈ ಆದೇಶ.

**ಸರ್ಕಾರಿ ಆದೇಶ ಸಂಖ್ಯೆ:ಯೋಇ 20 ಮಪ್ರಮಂ 2016, ಬೆಂಗಳೂರು, ದಿನಾಂಕ:14.06.2016**

ಮಲೆನಾಡು ಪ್ರದೇಶಾಭಿವೃದ್ಧಿ ಮಂಡಳಿ, ಶಿವಮೊಗ್ಗಕ್ಕೆ 2016-17ನೇ ಸಾಲಿನ ಪ್ರಥಮ ಕಂತಿನ ಅನುದಾನವಾಗಿ ರೂ.1250.00 ಲಕ್ಷ (ಹನ್ನೆರಡು ಕೋಟಿ ಐವತ್ತು ಲಕ್ಷ ರೂಪಾಯಿಗಳು ಮಾತ್ರ) ಗಳನ್ನು ಈ ಕೆಳಕಂಡ ಲೆಕ್ಕಶೀರ್ಷಿಕೆಗಳಡಿ ಬಿಡುಗಡೆ ಮಾಡಿದೆ.

| ಕ್ರಮ ಸಂಖ್ಯೆ | ಲೆಕ್ಕಶೀರ್ಷಿಕೆ | ಮೊತ್ತ (ರೂ. ಲಕ್ಷಗಳಲ್ಲಿ) |
|---|---|---|
| 1 | 2515-00-103-0-02-101 (ಸಹಾಯಾನುದಾನ) | 10.25 |
| 2 | 2515-00-103-0-02-132 (ಬಂಡವಾಳ ವೆಚ್ಚ) | 937.75 |
| 3 | 2515-00-103-0-02-422 (ವಿಶೇಷ ಘಟಕ ಯೋಜನೆ) | 214.75 |
| 4 | 2515-00-103-0-02-423 (ಗಿರಿಜನ ಉಪಯೋಜನೆ) | 87.25 |
| | **ಒಟ್ಟು** | **1250.00** |

**ಷರತ್ತುಗಳು:**

1. 2016-17ನೇ ಸಾಲಿನ ಕ್ರಿಯಾ ಯೋಜನೆಯನ್ನು ದಿನಾಂಕ 30.06.2016ರೊಳಗೆ ಅನುಮೋದನೆಗಾಗಿ ಸಲ್ಲಿಸತಕ್ಕದ್ದು.

.............2

2. ಬಿಡುಗಡೆಯಾದ ಈ ಅನುದಾನವನ್ನು ಮಂಡಳಿಯ ಬ್ಯಾಂಕ್ ಖಾತೆಗೆ ಜಮೆ ಮಾಡಿ, ನಂತರ ಅವಶ್ಯಕತೆಗನುಗುಣವಾಗಿ ಖರ್ಚು ಮಾಡತಕ್ಕದು.

3. ಮಂಡಳಿಯ ಬ್ಯಾಂಕ್ ಖಾತೆಯಲ್ಲಿ ಲಭ್ಯವಿರುವ ಅನುದಾನ ಮತ್ತು ಈ ಆದೇಶದಲ್ಲಿ ಬಿಡುಗಡೆ ಮಾಡಿರುವ ಅನುದಾನದ ಶೇಕಡ 75 ರಷ್ಟನ್ನು ವೆಚ್ಚ ಭರಿಸಿದ ನಂತರ ಹಣಬಳಕೆ ಪ್ರಮಾಣಪತ್ರದೊಂದಿಗೆ 2ನೇ ಕಂತಿನ ಅನುದಾನ ಬಿಡುಗಡೆಗೆ ಪ್ರಸ್ತಾವನೆ ಸಲ್ಲಿಸತಕ್ಕದ್ದು.

ಈ ಆದೇಶವನ್ನು ಸರ್ಕಾರಿ ಆದೇಶ ಸಂಖ್ಯೆ:ಎಫ್‌ಡಿ 03 ಟಿಎಫ್‌ಪಿ 2016, ದಿನಾಂಕ:02.04.2016ರಲ್ಲಿ ಆಡಳಿತ ಇಲಾಖೆಯ ಪ್ರಧಾನ ಕಾರ್ಯದರ್ಶಿ/ ಕಾರ್ಯದರ್ಶಿಗಳಿಗೆ ಪ್ರತ್ಯಾಯೋಜಿಸಿರುವ ವಿತ್ತಾಧಿಕಾರದನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

(ರಫೀ ಅಹಮದ್.ಎಂ.ಎಸ್.)
ಸರ್ಕಾರದ ಅಧೀನ ಕಾರ್ಯದರ್ಶಿ-1&2,
ಯೋಜನೆ, ಕಾರ್ಯಕ್ರಮ ಸಂಯೋಜನೆ
ಮತ್ತು ಸಾಂಖ್ಯಿಕ ಇಲಾಖೆ.

**ಇವರಿಗೆ:**

1. ಮಹಾಲೇಖಪಾಲರು, ಕರ್ನಾಟಕ, ಬೆಂಗಳೂರು.
2. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ಆರ್ಥಿಕ ಇಲಾಖೆ.
3. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಯೋಜನೆ, ಕಾರ್ಯಕ್ರಮ ಸಂಯೋಜನೆ ಮತ್ತು ಸಾಂಖ್ಯಿಕ ಇಲಾಖೆ.
4. ಸರ್ಕಾರದ ಕಾರ್ಯದರ್ಶಿ, ಯೋಜನೆ, ಕಾರ್ಯಕ್ರಮ ಸಂಯೋಜನೆ ಮತ್ತು ಸಾಂಖ್ಯಿಕ ಇಲಾಖೆ.
5. ಕಾರ್ಯದರ್ಶಿ, ಮಲೆನಾಡು ಪ್ರದೇಶಾಭಿವೃದ್ಧಿ ಮಂಡಳಿ, ಶಿವಮೊಗ್ಗ.
6. ನಿರ್ದೇಶಕರು, ಎಡಿಬಿ ವಿಭಾಗ, ಯೋಜನೆ, ಕಾರ್ಯಕ್ರಮ ಸಂಯೋಜನೆ ಮತ್ತು ಸಾಂಖ್ಯಿಕ ಇಲಾಖೆ.
7. ಜಂಟಿ ನಿರ್ದೇಶಕರು, ರಾಜ್ಯ ಹುಜೂರು ಖಜಾನೆ, ಬೆಂಗಳೂರು.
8. ಜಿಲ್ಲಾ ಖಜಾನಾಧಿಕಾರಿಗಳು, ಶಿವಮೊಗ್ಗ ಜಿಲ್ಲೆ, ಶಿವಮೊಗ್ಗ.
9. ಶಾಖಾಧಿಕಾರಿ, ಸ್ವೀಮರ ಶಾಖೆ, ಯೋಜನಾ ಇಲಾಖೆ (ಕಾಂಪೆಂಡಿಯಮ್‌ಗೋಸ್ಕರ).
10. ವಾರದ ರಾಜ್ಯಪತ್ರ.
11. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿ.

***